ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಗೃಹ- ಬೆಂಗಳೂರು ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 4/11/20

# ಸಂಪತ್‌ರಾಜ್ ನಾಪತ್ತೆ ಆಸ್ಪತ್ರೆ ವೈದ್ಯರ ವಿಚಾರಣೆ

ಉ.ವಾ 4/11/20

- ಆರೋಗ್ಯ ತಪಾಸಣೆ ನಡೆಸಿ ಬಿಡುಗಡೆ ಮಾಡಿದ್ದೇವೆ ಎಂದ ವೈದ್ಯರು
- ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆ ನ.5ಕ್ಕೆ ಮುಂದೂಡಿಕೆ

ಬೆಂಗಳೂರು: ಕೆ.ಜಿ.ಹಳ್ಳಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮೇಯರ್ ಸಂಪತ್‌ರಾಜ್ ಅವರನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿದ ಆರೋಪ ಸಂಬಂಧ ಖಾಸಗಿ ಆಸ್ಪತ್ರೆಯ ವೈದ್ಯರನ್ನು ಮಂಗಳವಾರವೂ ಸಿಸಿಬಿ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ.

ವಿಚಾರಣೆ ಸಂದರ್ಭದಲ್ಲಿ ವೈದ್ಯರು, ಕೊರೊನಾ ಸೋಂಕಿಗೊಳಗಾಗಿ ಆಸ್ಪತ್ರೆಗೆ ದಾಖಲಾಗಿದ್ದ ಸಂಪತ್‌ರಾಜ್‌ಗೆ ಚಿಕಿತ್ಸೆ ನೀಡಲಾಗಿದೆ. ಅನಂತರ ಆರೋಗ್ಯ ತಪಾಸಣೆ ನಡೆಸಿ ಬಿಡುಗಡೆ ಪತ್ರಕ್ಕೆ ಸಹಿ ಮಾಡುತ್ತೇವೆ. ಅವುಗಳನ್ನು ಪರಿಶೀಲಿಸಿ ಆಸ್ಪತ್ರೆಯ ಆಡಳಿತ ವಿಭಾಗದ ಸಿಬ್ಬಂದಿ ಬಿಡುಗಡೆ ಮಾಡುತ್ತಾರೆ. ವೈದ್ಯ ವೃಂದದಿಂದ ಯಾವುದೇ ನಿರ್ಲಕ್ಷ್ಯವಾಗಿಲ್ಲ ಎಂದು ವೈದ್ಯರು ಹೇಳಿಕೆ ದಾಖಲಿಸಿದ್ದಾರೆ ಎಂದು ಸಿಸಿಬಿ ಮೂಲಗಳು ತಿಳಿಸಿವೆ.

ಆಸ್ಪತ್ರೆಯ ಆಡಳಿತ ವಿಭಾಗದ ಸಿಬ್ಬಂದಿ ಸಂಪತ್‌ರಾಜ್ ತಪ್ಪಿಸಿಕೊಳ್ಳಲು ಸಹಾಯ ಮಾಡಿರಬಹುದು. ಇಲ್ಲವೇ ಆತನೇ ಕಣ್ಣು ತಪ್ಪಿಸಿಕೊಂಡು ಪರಾರಿ



ಯಾಗಿರಬಹುದು. ಮತ್ತೊಮ್ಮೆ ಆಸ್ಪತ್ರೆಯ ಆಡಳಿತ ವಿಭಾಗದ ಸಿಬ್ಬಂದಿ ವಿಚಾರಣೆ ನಡೆಸುತ್ತೇವೆ. ಮತ್ತೊಂದೆಡೆ ಸೋಮವಾರ ತಡರಾತ್ರಿ ಸಂಪತ್‌ರಾಜ್ ಅವರ ಇಬ್ಬರು ಸಂಬಂಧಿಕರನ್ನು ವಿಚಾರಣೆಗೊಳಪಡಿಸಲಾಗಿತ್ತು. ಈ ವೇಳೆ ಕೆಲವೊಂದು ಮಾಹಿತಿ ಸಿಕ್ಕಿದ್ದು ಎಲ್ಲರ ಮೊಬೈಲ್ ಪರಿಶೀಲಿಸುತ್ತಿದ್ದೇವೆ ಎಂದು ಸಿಸಿಬಿ ಮೂಲಗಳು ತಿಳಿಸಿವೆ.

## ನಿರೀಕ್ಷಣಾ ಜಾಮೀನು ಅರ್ಜಿ ಮುಂದೂಡಿಕೆ

ಕೆ.ಜಿ.ಹಳ್ಳಿ ಗಲಭೆಗೆ ಪ್ರಕರಣದಲ್ಲಿ ಸಂಚು ರೂಪಿಸಿದ ಆರೋಪ ಎದುರಿಸುತ್ತಿರುವ ಮಾಜಿ ಮೇಯರ್ ಸಂಪತ್‌ರಾಜ್ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆಯನ್ನು 70ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ಸ್ ಕೋರ್ಟ್‌ಗೆ (ಎಸ್ಸಿಎಸ್ಸಿ ವಿಶೇಷ ನ್ಯಾಯಾಲಯ) ನ.5ಕ್ಕೆ ಮುಂದೂಡಿದೆ. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರು ವಿಚಾರಣೆಯನ್ನು ಮುಂದೂಡಿ ಆದೇಶಿಸಿದ್ದಾರೆ. ಕೆ.ಜಿ.ಹಳ್ಳಿ ಗಲಭೆ ಪ್ರಕರಣದಲ್ಲಿ ಗಲಭೆಗೆ ಒಳ ಸಂಚು ರೂಪಿಸಿದ್ದಾರೆ ಎಂದು ತನ್ನ ವಿರುದ್ಧ ಆರೋಪ ಪಟ್ಟಿಯಲ್ಲಿ ತಿಳಿಸಿದ್ದಾರೆ. ಆದರೆ, ಎಲ್ಲಿ ಸಂಚು ನಡೆಸಲಾಗಿದೆ, ಯಾರ ಜತೆ ಸಂಚು ಮಾಡಲಾಗಿದೆ ಎಂಬುದನ್ನು ತಿಳಿಸಿಲ್ಲ. 67 ಎಫ್‌ಐಆರ್‌ಗಳು ದಾಖಲಾಗಿದ್ದು, ಯಾವುದರಲ್ಲಿಯೂ ತಮ್ಮ ಹೆಸರು ಉಲ್ಲೇಖಿಸಿಲ್ಲ. ಹೀಗಾಗಿ ನಿರೀಕ್ಷಣಾ ಜಾಮೀನು ನೀಡಬೇಕು ಎಂದು ಸಂಪತ್ ಅರ್ಜಿ ಸಲ್ಲಿಸಿದ್ದರು.